# ಕರ್ನಾಟಕ ವಿಧಾನ ಪರಿಷತ್ತು

ಮಾನ್ಯ ವಿಧಾನ ಪರಿಷತ್ತಿನ ಸದಸ್ಯರು : ಶ್ರೀ ಕೆ. ಅಬ್ದುಲ್ ಜಬ್ಬರ್ (ವಿಧಾನ ಸಭೆಯಿಂದ ಚುನಾಯಿತರಾದವರು)

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 249

ಉತ್ತರಿಸಬೇಕಾದ ದಿನಾಂಕ : 12.08.2025

ಉತ್ತರಿಸಬೇಕಾದ ಸಚಿವರು : ಮಾನ್ಯ ಮುಖ್ಯಮಂತ್ರಿ

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದಲ್ಲಿ ಹೊಸದಾಗಿ ನೇಮಕಾತಿಯಾಗುತ್ತಿರುವ ಸಹಕಾರ ಬ್ಯಾಂಕ್ ಸಿಬ್ಬಂದಿ ಹುದ್ದೆಗಳಲ್ಲಿ ಕನ್ನಡಿಗರಿಗೆ ಪ್ರಾಮುಖ್ಯತೆ ನೀಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಸಹಕಾರ ಬ್ಯಾಂಕುಗಳಲ್ಲಿನ ಸಿಬ್ಬಂದಿ ನೇಮಕಾತಿ ಅವಧಿಯಲ್ಲಿ ಕನ್ನಡಿಗರಿಗೆ ಪ್ರಾಮುಖ್ಯತೆ ನೀಡುವ ನಿಟ್ಟಿನಲ್ಲಿ ನೇಮಕಾತಿಯ ಪೂರ್ವದಲ್ಲಿ ಕರ್ನಾಟಕ ಸಹಕಾರ ಸಂಘಗಳ ನಿಯಮ 1960ರ ನಿಯಮ 18ರ ರೀತ್ಯಾ ಲಿಖಿತ ಪರೀಕ್ಷೆಯನ್ನು ನಡೆಸಲಾಗುತ್ತಿದ್ದು, ಲಿಖಿತ ಪರೀಕ್ಷೆಯಲ್ಲಿ ಕನ್ನಡ ಭಾಷೆಯ ಪತ್ರಿಕೆಯು ಒಳಗೊಂಡಿರುತ್ತದೆ. ಕನ್ನಡಿಗರಿಗೆ ಪ್ರಾಮುಖ್ಯತೆ ನೀಡದಿರುವ ಕುರಿತು ಯಾವುದೇ ದೂರುಗಳು ಸ್ವೀಕೃತವಾಗಿರುವುದಿಲ್ಲ. |
| ಆ | ಬಂದಿದ್ದಲ್ಲಿ, ರಾಜ್ಯದ ಸಹಕಾರ ಬ್ಯಾಂಕುಗಳಲ್ಲಿ ಕನ್ನಡಿಗರನ್ನು ನೇಮಕ ಮಾಡಿಕೊಳ್ಳದಿರಲು ಕಾರಣಗಳೇನು: (ಸಂಪೂರ್ಣ ಮಾಹಿತಿ ನೀಡುವುದು) | ಅನ್ವಯಿಸುವುದಿಲ್ಲ |
| ಇ | ಪ್ರಸ್ತುತ ರಾಜ್ಯದಲ್ಲಿ ಎಷ್ಟು ಸಹಕಾರ ಬ್ಯಾಂಕುಗಳು ಕಾರ್ಯನಿರ್ವಹಿಸುತ್ತಿವೆ: ಆ ಬ್ಯಾಂಕುಗಳಲ್ಲಿ ಎಷ್ಟೆಷ್ಟು ಜನ ಕನ್ನಡಿಗರು ಕಾರ್ಯನಿರ್ವಹಿಸುತ್ತಿದ್ದಾರೆ: (ಜಿಲ್ಲಾವಾರು ತಾಲ್ಲೂಕುವಾರು ಮಾಹಿತಿ ಒದಗಿಸುವುದು) | ರಾಜ್ಯದಲ್ಲಿ 1 ಅಪೆಕ್ಸ್ ಬ್ಯಾಂಕ್, 1 ಕಾಸ್ಕಾರ್ಡ್ ಬ್ಯಾಂಕ್, 21 ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್‌ಗಳು, 181 ಪಿಕಾರ್ಡ್ ಬ್ಯಾಂಕ್‌ಗಳು ಹಾಗೂ 240 ಪಟ್ಟಣ ಬ್ಯಾಂಕ್‌ಗಳು ಕಾರ್ಯ ನಿರ್ವಹಿಸುತ್ತಿರುತ್ತವೆ.<br><br>ಪ್ರಸ್ತುತ ರಾಜ್ಯದಲ್ಲಿ ಅಪೆಕ್ಸ್ ಬ್ಯಾಂಕ್‌ನಲ್ಲಿ 428 ಸಿಬ್ಬಂದಿಗಳು, ಕಾಸ್ಕಾರ್ಡ್ ಮತ್ತು ಪಿಕಾರ್ಡ್ ಬ್ಯಾಂಕಿನಲ್ಲಿ 394 ಸಿಬ್ಬಂದಿಗಳು, 21 ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕಿನಲ್ಲಿ 6886 ಜನ ಸಿಬ್ಬಂದಿಗಳು ಹಾಗೂ ರಾಜ್ಯದ 240 ಪಟ್ಟಣ ಬ್ಯಾಂಕುಗಳಲ್ಲಿ 7967 ಜನ ಸಿಬ್ಬಂದಿಗಳು ಕಾರ್ಯನಿರ್ವಹಿಸುತ್ತಿರುತ್ತಾರೆ.<br><br>ಮೇಲಿನ ಎಲ್ಲಾ ಸಂಸ್ಥೆಗಳಲ್ಲೂ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳೆಲ್ಲರೂ ಕನ್ನಡಿಗರೇ ಆಗಿರುತ್ತಾರೆ. |

| | | |
|---|---|---|
| ಈ | ಮುಂದಿನ ನೇಮಕಾತಿಗಳಲ್ಲಿ ಕನ್ನಡಿಗರಿಗೆ ಪ್ರಾಮುಖ್ಯತೆ ನೀಡಲು ಸರ್ಕಾರ ಕೈಗೊಂಡ ಮುನ್ನೆಚ್ಚರಿಕೆ ಕ್ರಮಗಳಾವುವು? | ಸಹಕಾರ ಸಂಘಗಳಲ್ಲಿ/ಬ್ಯಾಂಕುಗಳಲ್ಲಿ ಸಿಬ್ಬಂದಿ ನೇಮಕಾತಿಯನ್ನು ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959 ಹಾಗೂ ನಿಯಮ 1960ರ ನಿಯಮ 18ರ ರೀತ್ಯಾ ಮತ್ತು ಆಯಾ ಬ್ಯಾಂಕಿನ ಉಪ ನಿಯಮಗಳನ್ವಯ ಸಿಬ್ಬಂದಿಗಳನ್ನು ನೇಮಕಾತಿ ಮಾಡಿಕೊಳ್ಳಲಾಗುತ್ತಿದ್ದು, ದ್ವಿತೀಯ ದರ್ಜೆ ಸಹಾಯಕರು ಮತ್ತು ಅದರ ಮೇಲ್ಪಟ್ಟ ಹುದ್ದೆಗಳಿಗೆ ನಡೆಯುವ ಲಿಖಿತ ಪರೀಕ್ಷೆಯನ್ನು 200 ಅಂಕಗಳಿಗೆ ನಿಗಧಿಪಡಿಸಲಾಗಿದ್ದು, ಇವುಗಳಲ್ಲಿ ಕನ್ನಡ ಭಾಷೆಗಾಗಿ 50 ಅಂಕಗಳು, ಸಾಮಾನ್ಯ ಇಂಗ್ಲಿಷ್‌ಗಾಗಿ 25 ಅಂಕಗಳು, ಸಾಮಾನ್ಯ ಜ್ಞಾನಕ್ಕಾಗಿ 25 ಅಂಕಗಳು, ಸಹಕಾರಿ ವಿಷಯಗಳಿಗಾಗಿ 50 ಅಂಕಗಳು, ಭಾರತದ ಸಂವಿಧಾನಕ್ಕಾಗಿ 25 ಅಂಕಗಳು ಹಾಗೂ ಸಮಾಜದ ಯುಕ್ತವಾದ ಚಟುವಟಿಕೆಗಳು ಮತ್ತು ವಸ್ತುನಿಷ್ಠ ವಿಷಯ ವಸ್ತುಗಳಿಗೆ 25 ಅಂಕಗಳನ್ನು ನಿಗಧಿಪಡಿಸಲಾಗಿರುತ್ತದೆ. ಈ ಮೂಲಕ ಕನ್ನಡಿಗರಿಗೆ ಪ್ರಾಮುಖ್ಯತೆಯನ್ನು ನೀಡಲಾಗುತ್ತಿರುತ್ತದೆ. |

**ಕಡತ ಸಂಖ್ಯೆ: ಸಿಒ 128 ಸಿಸಿಬಿ 2025**

(ಸಿದ್ದರಾಮಯ್ಯ)
ಮುಖ್ಯಮಂತ್ರಿ